## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೊಪ್ಪಳ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆಯಲ್ಲಿ ಬಾಕಿ ವೇತನವನ್ನು ಪಾವತಿಸಲು ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಡತ ಸಂಖ್ಯೆ ಗ್ರಾಅಪ147 ಎಸ್.ಎಸ್.ಕೆ.2021

**ಪ್ರಸ್ತಾವನೆ:**

ಕೊಪ್ಪಳ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಸಾಹೇಬಲಾಲ್ ನದಾಫ್, ಸಹಾಯಕ ಇಂಜನಿಯರ್ –2 ಇವರಿಗೆ ದಿನಾಂಕ:04.09.2019 ರಿಂದ 31.03.2020ರ ಅವಧಿಗೆ (ನವೆಂಬರ್ – 2019ರ ವೇತನ ಹೊರತುಪಡಿಸಿ) ವೈದ್ಯಕೀಯ ಆಧಾರದ ಮೇಲೆ ಸಂಯುಕ್ತ ರಜೆಯನ್ನು ಮುಖ್ಯ ಇಂಜನಿಯರ್ ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆ ಇವರು ಮಂಜೂರು ಮಾಡಿರುತ್ತಾರೆ. ಆದರೆ ಸದರಿ ಅವಧಿಗೆ ವೇತನ ಪಾವತಿಸಿರುವುದಿಲ್ಲ. ಈ ಅವಧಿಗೆ ಒಟ್ಟು ರೂ.5.01ಲಕ್ಷಗಳ ಬಾಕಿ ವೇತನ ನೀಡಬೇಕಾಗಿದ್ದು, ಲೆಕ್ಕಶೀರ್ಷಿಕೆ 2059–00–101–0–26–005ರ ಅಡಿ ಬಿಡುಗಡೆ ಮಾಡಲು ಮೇಲೆ(2)ರ ಕಡತದಲ್ಲಿ ಪ್ರಸ್ತಾವಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಬಾಕಿ ವೇತನ ಪಾವತಿಗಾಗಿ ರೂ.5.01ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515–00–196–1–05–300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 265 ವೆಚ್ಚ 6/2021(ಇ) ದಿನಾಂಕ: 15ನೇ ಮೇ 2021**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ತಾಲ್ಲೂಕು ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ.5.01ಲಕ್ಷ (ರೂಪಾಯಿ ಐದು ಲಕ್ಷದ ಒಂದು ಸಾವಿರ ಲಕ್ಷಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು. (ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ–2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

| ಕ್ರ. ಸಂ | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆ.ಶೀ.2515–00–196–1–05–300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಕೊಪ್ಪಳ | 2059–00–101–0–26–005 | 5.01 |
| | **ಒಟ್ಟು** | | **5.01** |

1416356957

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ತಾಲ್ಲೂಕು ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ**

(ಎಂ. ಮಂಜುನಾಥ)

ಸರ್ಕಾರದ ಅಧೀನ ಕಾರ್ಯದರ್ಶಿ(ಜಿಪಂ)

ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ–2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು–2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಕೊಪ್ಪಳ
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ,ಕೆಪಿ.ಟಿಸಿ.ಎಲ್ ಕಟ್ಟಡ, ಬೆಂಗಳೂರು
6. ಜಿಲ್ಲಾ ಖಜಾನೆ, ಕೊಪ್ಪಳ
7. ರಕ್ಷಾ ಕಡತಕ್ಕೆ
8. ಹೆಚ್ಚುವರಿ ಪ್ರತಿ